**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**<u>ಫೌಜುದಾರಿ ಪ್ರಕರಣ ಸಂಖ್ಯೆ : 1/2025</u>**

**ಚಾ.ಸಾಃ 15, ಫ್ರಾ.ಸಾಃ 05**

| | |
|---|---|
| ಸಾಕ್ಷಿದಾರನ ಹೆಸರು | ಶಿವರಾಮ ದೇಸಾಯಿ |
| ತಂದೆಯ ಹೆಸರು | ಶಂಕರ ದೇಸಾಯಿ |
| ವಯಸ್ಸು | 56 ವರ್ಷಗಳು |
| ಉದ್ಯೋಗ | ಸಹಾಯಕ ಆರಕ್ಷಕ ಉಪ-ನಿರೀಕ್ಷಕರು, ಕಾರವಾರ ನಗರ ಠಾಣೆ |
| ವಾಸ್ತವ್ಯ | ಕಾರವಾರ |

**<u>ಸಾಕ್ಷಿಯನ್ನು ದಿನಾಂಕಃ 06-01-2026 ರಂದು ಕರೆಸಿ ಪ್ರಮಾಣೀಕರಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಎಪಿಪಿಯವರಿಂದ,</u>**

ನಾನು ಜುಲೈ-2019 ರಿಂದ ಜುಲೈ-2025 ರ ವರೆಗೆ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಸಹಾಯಕ ಆರಕ್ಷಕ ಉಪ-ನಿರೀಕ್ಷಕನಾಗಿ ಕೆಲಸ ಮಾಡಿರುತ್ತೇನೆ.

ದಿನಾಂಕ 28-06-2024 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ರಾತ್ರಿ 11-10 ಗಂಟೆಗೆ ಪಿರ್ಯಾದುದಾರರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ನಂ.145/2024 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದೂರನ್ನು ನೋಡುತ್ತಿದ್ದು ಅದನ್ನು ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-10 ಎಂದು, ಸಾಕ್ಷಿ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು.

ದಿನಾಂಕ 29-06-2024 ರಂದು ಸಂಜೆ 04-00 ರಿಂದ 05-30 ರ ಸಮಯಕ್ಕೆ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪಿರ್ಯಾದಿ ತೋರಿಸಿದ ಸ್ಥಳದಲ್ಲಿ ಪಂಚರ ಸಮಕ್ಷಮ ಸ್ಥಳ ಪಂಚನಾಮೆ ಮತ್ತು ಕಚ್ಚಾ ನಕಾಶೆ ತಯಾರಿಸಿ ಫೋಟೋ ತೆಗೆಸಿ ಸ್ಥಳದಲ್ಲಿ ಅಪಘಾತಕ್ಕೊಳಗಾಗಿದ್ದ ಕಾರು ಮತ್ತು ಬಸ್ಸುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತೇನೆ. ಸ್ಥಳ ಪಂಚನಾಮೆಯನ್ನು ನೋಡುತ್ತಿದ್ದು ಅದನ್ನು ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-2(ಡಿ) ಎಂದು ಗುರುತಿಸಲಾಯಿತು. ಕಚ್ಚಾ ನಕಾಶೆಯನ್ನು ನೋಡುತ್ತಿದ್ದು ಅದನ್ನು ನಿಪಿ-3 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-3(ಡಿ) ಎಂದು ಗುರುತಿಸಲಾಯಿತು. ನಿಪಿ-4 ರಿಂದ 9 ಫೋಟೋಗಳನ್ನು ನೋಡಿ ಘಟನಾ ಸ್ಥಳ ಮತ್ತು ವಾಹನಗಳನ್ನು ಗುರುತಿಸಿರುತ್ತಾರೆ.

ಅದೇ ದಿನ ಚಾಸಾ-6 ಮತ್ತು 7 ರವರ ಹೇಳಿಕೆ ಪಡೆದಿರುತ್ತೇನೆ.

ನಂತರ ಕೇಸಿನ ಕಡತವನ್ನು ಚಾಸಾ-17 ರವರಿಗೆ ವಹಿಸಿರುತ್ತೇನೆ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಎಂ. ಎಲ್. ನಾಯ್ಕರಿಂದಃ</u>**

ನಾನು ಅಪಘಾತ ಸ್ಥಳಕ್ಕೆ ಭೇಟಿ ನೀಡಿದಾಗ ಅಪಘಾತಕ್ಕೊಳಗಾದ ವಾಹನಗಳನ್ನು ರಸ್ತೆಯ ಪಕ್ಕದಲ್ಲಿ ನಿಲ್ಲಿಸಲಾಗಿತ್ತು. ನಿಪಿ–2 ಮತ್ತು 3 ರಲ್ಲಿ ಅಪಘಾತ ಸ್ಥಳವನ್ನು ತಪ್ಪಾಗಿ ತೋರಿಸಿದ್ದು ನಾನು ತೋರಿಸುವ ಸ್ಥಳದಲ್ಲಿ ಅಪಘಾತ ಆಗಿಲ್ಲ ಎಂದರೆ ಸರಿಯಲ್ಲ. ನಿಪಿ–3 ರಲ್ಲಿ ದಿನಾಂಕವನ್ನು ನಮೂದಿಸಿಲ್ಲ. ಚಾಸಾ–6 ಮತ್ತು 7 ಘಟನಾ ಸ್ಥಳದಲ್ಲಿ ಇದ್ದರು, ಆದ್ದರಿಂದ ಅವರ ಹೇಳಿಕೆ ಪಡೆದುಕೊಂಡಿದ್ದೇನೆ. ಚಾಸಾ–6 ಮತ್ತು 7 ಅಪಘಾತದ ಪ್ರತ್ಯಕ್ಷ ಸಾಕ್ಷಿದಾರರು ಅಲ್ಲದೇ ಇದ್ದರೂ ಅವರನ್ನು ಪ್ರತ್ಯಕ್ಷ ಸಾಕ್ಷಿದಾರರಂತೆ ಬಿಂಬಿಸಿ ಹೇಳಿಕೆಯನ್ನು ಸೃಷ್ಟಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ದೂರು ದಾಖಲಾದ ತಕ್ಷಣವೇ ಅಪಘಾತ ಸ್ಥಳಕ್ಕೆ ಹೋಗಲಿಲ್ಲ. ಅಪಘಾತ ಆದ ಸಮಯದಿಂದ ನಾನು ಸ್ಥಳ ಪಂಚನಾಮೆ ಮಾಡುವವರೆಗೆ ಸದರಿ ರಸ್ತೆಯಲ್ಲಿ ಬಹಳಷ್ಟು ವಾಹನಗಳು ಓಡಾಡಿರುತ್ತವೆ ಎಂದರೆ ಸರಿ. ಗೇರುಸೊಪ್ಪಾದಲ್ಲಿ ಹೊರಠಾಣೆ ಇದೆ. ಹೊನ್ನಾವರ ಪೋಲೀಸ್ ಠಾಣೆಗಿಂತ ಗೇರುಸೊಪ್ಪಾ ಹೊರಠಾಣೆ ಅಪಘಾತ ಸ್ಥಳಕ್ಕೆ ಹತ್ತಿರದಲ್ಲಿದೆ ಎಂದರೆ ಸರಿ. ನಿಜಸಂಗತಿಗೆ ವಿರುದ್ಧವಾಗಿ ಪಂಚನಾಮೆ ಮತ್ತು ಕಚ್ಚಾ ನಕಾಶೆಯನ್ನು ತಯಾರಿಸಿ ಸಾಕ್ಷಿದಾರರ ಹೇಳಿಕೆಯನ್ನು ಸೃಷ್ಟಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**